ಇ. ತಮಿಳುನಾಡಿನಲ್ಲಿ ಸಣ್ಣಪುಟ್ಟ ಸಂಸ್ಥೆಗಳಿಗೆ "ಡೀಮ್ಡ್ ಯೂನಿವರ್ಸಿಟಿ" ಮಾನ್ಯತೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ. ಕಿದ್ವಾಯಿ ಸ್ಮಾರಕ ಗ್ರಂಥಿ ಸಂಸ್ಥೆಗೆ "ಡೀಮ್ಡ್ ಯೂನಿವರ್ಸಿಟಿ" ಮಾನ್ಯತೆ ನೀಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ;

ಡಾ: ಎ.ಬಿ. ಮಾಲಕರೆಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು)

ಅ. ಇಲ್ಲ

ಇ. ಇಲ್ಲ

ಈ. ಸದ್ಯಕ್ಕೆ ಪ್ರಸ್ತಾವನೆ ಇರುವುದಿಲ್ಲ.

ರಾಜ್ಯದಲ್ಲಿ ನಕಲಿ ವೈದ್ಯರ ಹಾವಳಿ

1494(1859) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ): ಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯಕೀಯ ಪದ್ಧತಿಗಳು/ ಹೋಮಿಯೋಪತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ರಾಜ್ಯದಲ್ಲಿ ವೈದ್ಯಕೀಯ ಪದವಿ ಇಲ್ಲದೆ ನಕಲಿ ವೈದ್ಯ ವೃತ್ತಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ರಾಜ್ಯದ ವಿವಿಧ ಭಾಗಗಳಲ್ಲಿ ಅದರಲ್ಲೂ ಹೆಚ್ಚಾಗಿ ಗ್ರಾಮಾಂತರ ಪ್ರದೇಶಗಳಲ್ಲಿ ವೈದ್ಯಕೀಯ ಪದವಿ ಇಲ್ಲದೆ ವೈದ್ಯ ವೃತ್ತಿ ಮಾಡುತ್ತಿರುವವರ ಮೇಲೆ ಕ್ರಮ ಕೈಗೊಳ್ಳಲು ಸರ್ಕಾರ ನಿರ್ಧರಿಸಿದೆಯೇ

ಶ್ರೀಮತಿ ನಫೀಸಾ ಪಜಲ್ (ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯಕೀಯ ಪದ್ಧತಿಗಳು/ ಹೋಮಿಯೋಪತಿ ರಾಜ್ಯ ಸಚಿವರು)

ಅ. ಬಂದಿದೆ.

ಆ. ನಿರ್ಧರಿಸಿದೆ.

ಈ ನಕಲಿ ವೈದ್ಯರ ಹಾವಳಿಯನ್ನು ತಡೆಗಟ್ಟಲು ಸರ್ಕಾರವು ಸುತ್ತೋಲೆ ಸಂಖ್ಯೆ: ಆಕುಕ 599 ಪಿಐಎಂ 2001, ದಿನಾಂಕ: 28.11.2001ರಲ್ಲಿ ರಾಜ್ಯದ ಎಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಮತ್ತು ಭಾರತೀಯ ವೈದ್ಯ ಪದ್ಧತಿಗಳು ಮತ್ತು ಹೋಮಿಯೋಪತಿ ವಿಭಾಗೀಯ ಕಛೇರಿಗಳ ಅಧಿಕಾರಿಗಳಿಗೆ ನಿರ್ದೇಶನ ನೀಡುತ್ತಾ, ತಮ್ಮ ಅಧಿಕಾರ ವ್ಯಾಪ್ತಿಯಲ್ಲಿ ನಕಲಿ ವೈದ್ಯರನ್ನು ಗುರುತಿಸಿ. ಅವರ ವಿರುದ್ಧ ಸಂಬಂಧಪಟ್ಟ ಕೌನ್ಸಿಲ್: ಬೋರ್ಡ್‌ಗೆ ತಿಳಿಸಲು ಆದೇಶಿಸಲಾಗಿದೆ. ಇದಲ್ಲದೆ, ಅನಧಿಕೃತ ವೈದ್ಯ ವೃತ್ತಿ ನಡೆಸುತ್ತಿರುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಸರ್ಕಾರವು ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೈದ್ಯ ವೃತ್ತಿದಾರರ ನೋಂದಣಿ ಹಾಗೂ ವೈದ್ಯ ವೃತ್ತಿದಾರರ ಅಧಿನಿಯಮ 1961 ಸೆಕ್ಷನ್ 40(2) ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 418 ಪಿಐಎಂ 81, ದಿನಾಂಕ: 27.9.82 ರಲ್ಲಿ ಆಯುರ್ವೇದ ಮತ್ತು ಯುನಾನಿ ವೈದ್ಯ ಮಂಡಳಿಯ ನೋಂದಣಾಧಿಕಾರಿಗಳನ್ನು ನೇಮಿಸಿದೆ. ಇದರಂತೆ ನೋಂದಣಾಧಿಕಾರಿಗಳು ರಾಜ್ಯದ ಎಲ್ಲಾ ಭಾಗಗಳಲ್ಲೂ ಬೇಟಿ ನೀಡಿ ನಕಲಿ ವೈದ್ಯರ ಹಾವಳಿಯನ್ನು ತಡೆಗಟ್ಟಲು ಶ್ರಮಿಸುತ್ತಿದ್ದಾರೆ.